# ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ

ಸಂ:ಕಕರಸಾ:ಕೇಕ:ಸಂ:ಕಾ: 1922:2021-22 ದಿನಾಂಕ: 9 .11.2021.

## ಸುತ್ತೋಲೆ

**ವಿಷಯ**: ನಿಗಮದ ಬಸ್ಸುಗಳಲ್ಲಿ ಪ್ರಯಾಣಿಕರು ಮೊಬೈಲ್ ದೂರವಾಣಿಯಲ್ಲಿ ಜೋರಾಗಿ ಹಾಡುಗಳನ್ನು ಹಾಕುವುದನ್ನು ನಿರ್ಬಂಧಿಸುವ ಬಗ್ಗೆ.

**ಉಲ್ಲೇಖ**:1.ಮಾನ್ಯ ಉಚ್ಛನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ 25576/2019(PIL)

2.ಸಾರಿಗೆ ಆಯುಕ್ತರ ಪತ್ರ ಸಂಖ್ಯೆ:ಸಾಆ/ಪ್ರವರ್ತನ-3/ವೈವ-70/2019-20 ದಿನಾಂಕ.07.10.2021.

*****

ಕ.ಕ.ರ.ಸಾ.ನಿಗಮವು ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ಗುಣಮಟ್ಟದ ಸಮರ್ಪಕ ಸುರಕ್ಷಿತ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ. ಈ ನಿಟ್ಟಿನಲ್ಲಿ ವಿವಿಧ ಮಾದರಿಯ ಸಾರಿಗೆ ಸೇವೆಗಳನ್ನು ರಾಜ್ಯದೊಳಗೆ ಮತ್ತು ನೆರೆ-ಹೊರೆಯ ಅಂತರ ರಾಜ್ಯ ಪ್ರದೇಶಗಳಲ್ಲಿ ಕಲ್ಪಿಸಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಮೊಬೈಲ್ ದೂರವಾಣಿ ಮೇಲೆ ಬಹಳಷ್ಟು ಅವಲಂಬಿತರಾಗಿ ಮೊಬೈಲ್ ದೂರವಾಣಿ ಬಳಕೆ ದಿನೇ ದಿನೇ ಹೆಚ್ಚಾಗುತ್ತಿದೆ. ಸಾರ್ವಜನಿಕರು ಬಸ್ಸಿನಲ್ಲಿ ಮೊಬೈಲ್ ದೂರವಾಣಿಯ ಮೂಲಕ ಜೋರಾಗಿ ಹಾಡು/ಪದ್ಯ/ವಾರ್ತೆ/ಸಿನಿಮಾ ಇತ್ಯಾದಿ ಹಾಕುತ್ತಿದ್ದು ಇದರಿಂದ ಶಬ್ದ ಮಾಲಿನ್ಯ ಹಾಗೂ ಬಸ್ಸಿನಲ್ಲಿ ಪ್ರಯಾಣಿಸುವ ಇತರೆ ಸಹ ಪ್ರಯಾಣಿಕರಿಗೆ ತೊಂದರೆವುಂಟಾಗುತ್ತಿರುವುದು ಕಂಡು ಬಂದಿದ್ದು, ಈ ಸಂಬಂಧ ಸಾರ್ವಜನಿಕ ಸಾರಿಗೆಗಳಲ್ಲಿ ಶಬ್ದಮಾಲಿನ್ಯ ನಿಯಂತ್ರಿಸುವ ಕುರಿತು ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮಾನ್ಯ ಉಚ್ಛನ್ಯಾಯಾಲಯದಲ್ಲಿ ದಾಖಲಾಗಿರುತ್ತದೆ.

ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989, ನಿಯಮ 94(1)(V) ನ್ನು ಉಲ್ಲಂಘಿಸಿ ನಿಗಮದ ಬಸ್ಸುಗಳಲ್ಲಿ ಪ್ರಯಾಣಿಕರು ಮೊಬೈಲ್ ದೂರವಾಣಿ ಮೂಲಕ ಜೋರಾಗಿ ಶಬ್ದ ಹೊರಸೂಸುವಂತೆ ಹಾಡು/ಪದ್ಯ/ವಾರ್ತೆ/ಸಿನಿಮಾ ಇತ್ಯಾದಿ ಹಾಕುವುದರಿಂದ ಶಬ್ಧಮಾಲಿನ್ಯ ಉಂಟಾಗುವುದರಿಂದ **"ನಿಗಮದ ಬಸ್ಸುಗಳಲ್ಲಿ ದೂರವಾಣಿಯ ಮೂಲಕ ಜೋರಾಗಿ ಹಾಡು/ಪದ್ಯ/ವಾರ್ತೆ/ಸಿನಿಮಾ ಇತ್ಯಾದಿ ಹಾಕುವುದನ್ನು ಕಡ್ಡಾಯವಾಗಿ ನಿರ್ಬಂಧಿಸಲಾಗಿದೆ"**. ಈ ಸಂಬಂಧ ಕರ್ತವ್ಯ ನಿರತ ಚಾಲನಾ ಸಿಬ್ಬಂದಿಗಳು ಪ್ರಯಾಣಿಕರಿಗೆ ಸೂಕ್ತ ತಿಳುವಳಿಕೆ ನೀಡುವುದು ಹಾಗೂ ಹೆಚ್ಚಾಗಿ ಶಬ್ದ ಬರುವಂತೆ ಹಾಗೂ ಸಹ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವಂತೆ ಮೊಬೈಲ್ ದೂರವಾಣಿ ಬಳಸುತ್ತಿದ್ದಲ್ಲಿ ಆ ರೀತಿ ಬಳಸದಂತೆ ವಿನಂತಿಸುವುದು.

**ಒಂದು ವೇಳೆ ಸದರಿ ಪ್ರಯಾಣಿಕ ವಿನಂತಿಗೆ ಮನ್ನಣೆ ನೀಡದೇ ಕರ್ನಾಟಕ ಮೋಟಾರು ವಾಹನಗಳ** ನಿಯಮಗಳನ್ನು ಉಲ್ಲಂಘನೆ ಮಾಡುತ್ತಿರುವುದು ಕಂಡು ಬಂದಲ್ಲಿ, ಸದರಿ ಪ್ರಯಾಣಿಕರನ್ನು ನಿಯಮಾನುಸಾರ ಚಾಲಕ **ಅಥವಾ ನಿರ್ವಾಹಕ ನಿಗಮದ ಬಸ್ಸಿನಿಂದ ಇಳಿಸುವುದು, ಸದರಿ ಪ್ರಯಾಣಿಕನು ಇಳಿಯುವವರೆಗೂ ವಾಹನವನ್ನು** ನಿಲ್ಲಿಸುವುದು. ಅಂತಹ ಪ್ರಯಾಣಿಕರಿಗೆ ಪ್ರಯಾಣ ದರವನ್ನು ಹಿಂತಿರುಗಿಸುವಂತಿಲ್ಲ.

ಈ ಸುತ್ತೋಲೆಯ ನಿರ್ದೇಶನಗಳು ತಕ್ಷಣದಿಂದ ಜಾರಿಗೆ ಬರುತ್ತವೆ. ಸುತ್ತೋಲೆಯನ್ನು ಸ್ವೀಕರಿಸಿದ ಬಗ್ಗೆ ಸ್ವೀಕೃತಿಯನ್ನು ಹಾಗೂ ಕೈಗೊಂಡ ಕ್ರಮದ ಬಗ್ಗೆ ಅನುಸರಣಾ ವರದಿಯನ್ನು ನೀಡುವುದು.

1044
9/11/21

ವ್ಯವಸ್ಥಾಪಕ ನಿರ್ದೇಶಕರು

**ಪ್ರತಿಯನ್ನು**:ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕ.ಕ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.

**ಪ್ರತಿಯನ್ನು**:ಎಲ್ಲಾ ವಿಭಾಗ ನಿಯಂತ್ರಣಾಧಿಕಾರಿಗಳು, ಕ.ಕ.ರ.ಸಾ. ನಿಗಮ ರವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಪ್ರತಿಯನ್ನು**:ಎಲ್ಲಾ ವಿಭಾಗೀಯ ಸಂಚಲನಾಧಿಕಾರಿಗಳು/ ಮಾರ್ಗ ತನಿಖಾ ಸಂಯೋಜಕರು, ಕ.ಕ.ರ.ಸಾ. ನಿಗಮ, ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.